ನಿ-72 (22)

**ಶ್ರೀ ಅರುಣ ಶಹಾಪುರ ವಿಧಾನ ಪರಿಷತ್ತು ಸದಸ್ಯರು ಇವರು ನಿಯಮ 72 ರಡಿಯಲ್ಲಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆ ಸಂಖ್ಯೆ: 22 ಕ್ಕೆ ಉತ್ತರ.**

**ಸೂಚನೆ:** ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘವನ್ನು ಕರ್ನಾಟಕ ಸರ್ಕಾರ ಸ್ಥಾಪಿಸಿ ಅನುಸೂಚಿತ ಜಾತಿ/ಪಂಗಡ, ಹಿಂದುಳಿದ ವರ್ಗಗಳು, ಅಲ್ಪಸಂಖ್ಯಾತ ವರ್ಗಕ್ಕೆ ಸೇರಿದ ಎಲ್ಲರನ್ನೂ ಒಳಗೊಂಡು ಸಂಸ್ಥೆಗಳ ನಿರ್ವಹಣೆಗೆ ವಹಿಸಲಾಯಿತು. ಮೊರಾರ್ಜಿ ದೇಸಾಯಿ, ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳು, ಒಳ್ಳೆಯ ಮಾದರಿ ಶಾಲೆಗಳಾಗಿ ಗುಣಮಟ್ಟದ ಶಿಕ್ಷಣ ಪ್ರಸರಣದಲ್ಲಿ ಸಾಧನೆ ಮಾಡುತ್ತಿದೆ.

ಈಗ ಹಿಂದುಳಿದ ವರ್ಗಗಳ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಅಲ್ಪಸಂಖ್ಯಾತ ಇಲಾಖೆಗಳು ಪ್ರತ್ಯೇಕಗೊಂಡ ಕಾರಣ ಆಯಾ ಇಲಾಖೆಗಳೇ ವಸತಿ ಶಾಲೆಗಳನ್ನು ವಹಿಸಿಕೊಳ್ಳಬೇಕೆನ್ನುವ ಒತ್ತಡಗಳು ಈ ವ್ಯವಸ್ಥೆಗೆ ಮಾರಕವಾಗಿದ್ದು, ಕ.ವ.ಶಿ ಸಂಸ್ಥೆಗಳ ಸಂಘವನ್ನು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ನಿರ್ದೇಶನಾಲಯದಡಿ ತಂದು ಜವಾಹರ ನವೋದಯ/ಕೇಂದ್ರಿಯ ವಿದ್ಯಾಲಯ ಸಮಿತಿ ಮಾದರಿಯಲ್ಲಿ ಅಭಿವೃದ್ಧಿ ಪಡಿಸುವ ಕುರಿತು ಮಾನ್ಯ ಸಮಾಜ ಕಲ್ಯಾಣ ಸಚಿವರ ಗಮನ ಸೆಳೆಯ ಬಯಸುತ್ತೇನೆ.

**ಉತ್ತರ:** ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘವು ಅಸ್ಥಿತ್ವಕ್ಕೆ ಬಂದ ಮೇಲೆ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ, ಅಲ್ಪಸಂಖ್ಯಾತರ ವಸತಿ ಶಾಲೆಗಳು ಮತ್ತು ಹಿಂದುಳಿದ ವರ್ಗಗಳ ವಸತಿ ಶಾಲೆಗಳು, ಒಟ್ಟಾಗಿ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದವು. ತದನಂತರ ಸರ್ಕಾರದ ಆದೇಶ ಸಂಖ್ಯೆ: MWD 37 MDS 2015 ಬೆಂಗಳೂರು ದಿ:09.03.2015 ರಂತೆ, ಸಂಘದ ಅಧೀನದಲ್ಲಿರುವ ಅಲ್ಪಸಂಖ್ಯಾತರ ವಸತಿ ಶಾಲೆ/ಕಾಲೇಜುಗಳನ್ನು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಿಂದ ಅಲ್ಪಸಂಖ್ಯಾತರ ನಿರ್ದೇಶನಾಲಯ ವ್ಯಾಪ್ತಿಗೆ ವರ್ಗಾಯಿಸಲಾಗಿರುತ್ತದೆ.

ಪ್ರಸ್ತುತ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಮತ್ತು ಹಿಂದುಳಿದ ವರ್ಗಗಳ ಒಟ್ಟು 826 ವಸತಿ ಶಾಲೆ/ಕಾಲೇಜುಗಳು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿವೆ. ಸದರಿ ವಸತಿ ಶಾಲೆ/ಕಾಲೇಜುಗಳಲ್ಲಿ 1,68,587 ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿರುತ್ತಾರೆ.

ಮೇಲ್ಕಂಡ ವಸತಿ ಶಾಲೆ/ಕಾಲೇಜುಗಳ ಸಮರ್ಪಕ ನಿರ್ವಹಣೆ ಹಾಗೂ ವಸತಿ ಶಾಲೆ/ಕಾಲೇಜುಗಳ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಎಲ್ಲಾ ರೀತಿಯ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗುತ್ತಿದೆ.

(ಬಿ.ಶ್ರೀರಾಮುಲು)
**ಸಮಾಜ ಕಲ್ಯಾಣ ಇಲಾಖಾ ಸಚಿವರು.**

**ಕಡತ ಸಂಖ್ಯೆ: ಸಕಇ 398 ಮೊದೇಶಾ 2020**